ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಶುಕ್ರವಾರ, ದಿನಾಂಕ : 26ನೇ ಜುಲೈ, 2019

ರಾಜ್ಯದಲ್ಲಿ ನಕಲಿ ವೋಟರ್ ಐಡಿ, ಆಧಾರ್ ಕಾರ್ಡ್, ಜನನ ಪ್ರಮಾಣ ಪತ್ರಗಳನ್ನು ತಯಾರು ಮಾಡಿ ಬಾಂಗ್ಲಾದೇಶದ ನಾಗರಿಕರಿಗೆ ಮಾರಾಟ ಮಾಡುತ್ತಿರುವ ಬಗ್ಗೆ

ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

626 (747) ಮಾನ್ಯ ಗೃಹ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ಅಕ್ರಮವಾಗಿ ನಕಲಿ ವೋಟರ್ ಐಡಿ, ಆಧಾರ್ಕಾರ್ಡ್, ಜನನ ಪ್ರಮಾಣ ಪತ್ರಗಳನ್ನು ತಯಾರಿಸಿ ಬಾಂಗ್ಲಾದೇಶದ ನಾಗರಿಕರಿಗೆ ಮಾರಾಟ ಮಾಡುತ್ತಿರುವ ಡಿಜಿಟಲ್ ಅಡ್ಡೆಗಳ ಹಾವಳಿ ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈವರೆಗೆ ಎಷ್ಟು ನಕಲಿ ಡಿಜಿಟಲ್ ಅಡ್ಡೆಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಬೆಳಗಾವಿ ಜಿಲ್ಲೆಯ ಗಡಿ ಭಾಗಗಳಲ್ಲಿ ಕಾನೂನು ಬಾಹಿರವಾಗಿ ನಕಲಿ ಸರ್ಕಾರಿ ದಾಖಲೆಗಳನ್ನು ವಿತರಿಸುತ್ತಿರುವ ಯಾವ ಯಾವ ಡಿಜಿಟಲ್ ಅಡ್ಡೆಗಳನ್ನು ಗುರುತಿಸಲಾಗಿದೆ ; ಅವುಗಳ ವಿರುದ್ಧ ಏನೇನು ಕಾನೂನು ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಈ) ಈವರೆಗೆ ಎಷ್ಟು ಪ್ರಮಾಣದ ನಕಲಿ ಸರ್ಕಾರಿ ದಾಖಲೆಗಳನ್ನು ವಿತರಿಸಲಾಗಿದೆ ;

(ಉ) ಬೆಳಗಾವಿ ಗಡಿ ಪ್ರದೇಶದಿಂದ ಈವರೆಗೆ ಎಷ್ಟು ಮಂದಿ ಅಕ್ರಮ ಬಾಂಗ್ಲಾ ವಲಸಿಗರನ್ನು ಗಡಿಪಾರು ಮಾಡಲಾಗಿದೆ ; ಎಷ್ಟು ಪ್ರಮಾಣದ ನಕಲಿ ಸರ್ಕಾರಿ ದಾಖಲೆಗಳನ್ನು ವಶಪಡಿಸಿಕೊಳ್ಳಲಾಗಿದೆ ? (ವಿವರ ನೀಡುವುದು)